ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಗುರುವಾರ, ದಿನಾಂಕ : 24 ನೇ ಸೆಪ್ಟೆಂಬರ್, 2020

ಬೆಳಗಾವಿ ಜಿಲ್ಲೆಯ ರೈತಾಪಿ ಜನರಿಗೆ ನೀರಾವರಿ ಸೌಲಭ್ಯ ಒದಗಿಸುವ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

471 (578) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಬೆಳಗಾವಿ ಜಿಲ್ಲೆಯ ಪಶ್ಚಿಮ ಘಟ್ಟದಲ್ಲಿರುವ ಘಟಪ್ರಭಾ, ಮಲಪ್ರಭಾ, ಹಿರಣ್ಯಕೇಶಿ, ಕೃಷ್ಣಾ ಮತ್ತು ವೇದಗಂಗಾ ನದಿಗಳು ಮಳೆಗಾಲದ ಸಂದರ್ಭದಲ್ಲಿ ತುಂಬಿ ಹರಿದು ಲಕ್ಷಾಂತರ ಕ್ಯೂಸೆಕ್ಸ್ ನೀರು ಸಮುದ್ರ ಪಾಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸಮುದ್ರ ಪಾಲಾಗುವ ನೀರನ್ನು ಅಲ್ಲಲ್ಲಿ ಶೇಖರಣೆ ಮಾಡುವ ಯೋಜನೆಗಳನ್ನು ರೂಪಿಸಿ ನೀರಾವರಿಯಿಂದ ವಂಚಿತರಾದ ಈ ಭಾಗದ ಜನರಿಗೆ ನೀರಾವರಿ ಸೌಲಭ್ಯ ಒದಗಿಸುವ ಯೋಜನೆ ಜಾರಿಗೊಳಿಸುವ ಉದ್ದೇಶ ಸರ್ಕಾರಕ್ಕಿದೆಯೇ;

(ಇ) ಹಾಗಿದ್ದಲ್ಲಿ, ಈ ಭಾಗದ ರೈತಾಪಿ ಜನರಿಗೆ ನೆರವಾಗುವ ದೃಷ್ಟಿಯಲ್ಲಿ ಸರ್ಕಾರವು ಯಾವ ಕಾಲಮಿತಿಯಲ್ಲಿ ಇಂತಹ ಯೋಜನೆಗಳನ್ನು ಪೂರ್ಣಗೊಳಿಸಲು ಯೋಚಿಸಿದೆ?